53.

# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1395
2. ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 18.12.2025
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿ

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸಿಬ್ಬಂದಿಗಳ ಮತ್ತು ಅಧಿಕಾರಿಗಳ ನೇಮಕಾತಿ ನಿಯಮಗಳನ್ನು ಕಾಲಕ್ಕೆ ತಕ್ಕಂತೆ ತಿದ್ದುಪಡಿ, ಸುಧಾರಣೆ ಮಾಡಲು ಕ್ರಮವಹಿಸಿದೆಯೇ; ಮಾಡಿದ್ದರೇ ಯಾವ ಯಾವ ನಿಯಮಗಳನ್ನು ತಿದ್ದುಪಡಿ ಮಾಡಿದೆ: | ರಾಜ್ಯದಲ್ಲಿ ಸಿಬ್ಬಂದಿಗಳ ಮತ್ತು ಅಧಿಕಾರಿಗಳ ನೇಮಕಾತಿ ನಿಯಮಗಳನ್ನು ಕಾಲಕಾಲಕ್ಕೆ ಅಗತ್ಯತೆಗನುಸಾರವಾಗಿ ತಿದ್ದುಪಡಿ ಮಾಡಲು ಕ್ರಮವಹಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ರಾಜ್ಯ ಸಿವಿಲ್ ಸೇವೆಗೆ ಸಂಬಂಧಿಸಿದ ಈ ಕೆಳಕಂಡ ನಿಯಮಾವಳಿಗಳಿಗೆ ತಿದ್ದುಪಡಿ ಮಾಡಲಾಗಿರುತ್ತದೆ.<br>1) ಕರ್ನಾಟಕ ಸಿವಿಲ್ ಸೇವೆಗಳು (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳು 1996,<br>2) ಕರ್ನಾಟಕ ನಾಗರಿಕ ಸೇವಾ (ದೌರ್ಜನ್ಯ ಪ್ರಕರಣಗಳಲ್ಲಿ ಮೃತರಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವ್ಯಕ್ತಿಯ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ) (ವಿಶೇಷ) ನಿಯಮಗಳು 1999,<br>3) ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2020,<br>4)ಕರ್ನಾಟಕ ಸಿವಿಲ್ ಸೇವಾ (ಶೀಘ್ರಲಿಪಿಗಾರರ ಮತ್ತು ಬೆರಳಚ್ಚುಗಾರರ ಹುದ್ದೆಗಳ ನೇಮಕಾತಿ) ನಿಯಮಗಳು 1983 ಹಾಗೂ ಇನ್ನಿತರೆ ನಿಯಮಗಳನ್ನು ತಿದ್ದುಪಡಿ ಮಾಡಲಾಗಿರುತ್ತದೆ. |
| ಆ) | ಪ್ರಸ್ತುತ ಅನುಕಂಪದ ಆಧಾರದಲ್ಲಿ ಅಧಿಕಾರಿಗಳ/ಸಿಬ್ಬಂದಿಗಳ ನೇಮಕಾತಿ ನಿಯಮಗಳು ಯಾವುವು: ವಾರ್ಷಿಕವಾಗಿ ಎಷ್ಟು ಅನುಕಂಪದ ನೇಮಕಾತಿಗಳು ನಡೆಯುತ್ತವೆ: ಈ ನೇಮಕಾತಿಗಳಿಗೆ ಯಾರು ಅನುಮೋದನೆ ನೀಡುತ್ತಿದ್ದಾರೆ: ರಾಜ್ಯದ ವಿವಿಧ ಇಲಾಖೆ ಮತ್ತು ಇತರ ಸರ್ಕಾರಿ ಸಂಸ್ಥೆಗಳಲ್ಲಿ ಪ್ರಸ್ತುತ ಇರುವ ಅನುಕಂಪ ಆಧಾರಿತ ನೇಮಕಾತಿಯಾದ ಪ್ರಕರಣಗಳು ಎಷ್ಟು; | ಕರ್ನಾಟಕ ಸಿವಿಲ್ ಸೇವಾ (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳು 1996 ರನ್ವಯ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಲಾಗುತ್ತಿದೆ. ಸರ್ಕಾರಿ ಸೇವೆಯಲ್ಲಿರುವಾಗಲೇ ಮೃತರಾಗುವ ಸರ್ಕಾರಿ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲಾಗುವುದರಿಂದ, ಇಂತಿಷ್ಟೇ ನೇಮಕಾತಿಗಳು ಅನುಕಂಪದ ಆಧಾರದ ಮೇಲೆ ನಡೆಯುತ್ತವೆ ಎಂದು ನಿಖರವಾಗಿ ತಿಳಿಸಲು ಸಾಧ್ಯವಾಗುವುದಿಲ್ಲ. ಸರ್ಕಾರಿ ನೌಕರನು ನಿಧನ ಹೊಂದಿದ ನಂತರ ಅನುಕಂಪದ ಆಧಾರಿತ ನೌಕರಿ ನೀಡುವುದರಿಂದ, ಅರ್ಜಿದಾರರಿಂದ ಸ್ವೀಕೃತವಾಗುವ ಅರ್ಜಿಗಳನ್ನು ಸಂಬಂಧಿಸಿದ ಸಕ್ಷಮ ಪ್ರಾಧಿಕಾರ/ ನೇಮಕಾತಿ ಪ್ರಾಧಿಕಾರಗಳು ನಿಯಮಾನುಸಾರ ಪರಿಶೀಲಿಸಿ |

| | | |
|---|---|---|
| | | ನೇಮಕಾತಿಗಳನ್ನು ಕೈಗೊಳ್ಳುತ್ತವೆ. |
| ಇ) | ಅನುಕಂಪದ ಆಧಾರದಲ್ಲಿ ನಡೆಯುವ ನೇಮಕಾತಿಗಳಿಗೆ ಯಾವ ಮಟ್ಟದ ಹುದ್ದೆಯನ್ನು ನೀಡಲಾಗುತ್ತಿದೆ: ಆ ಹುದ್ದೆಗೆ ಅವರ ವಿದ್ಯಾರ್ಹತೆ ಮತ್ತು ಸೂಕ್ತತೆ/ಅರ್ಹತೆಯನ್ನು ಪರಿಶೀಲಿಸಲಾಗುತ್ತಿದೆಯೇ: ಈ ಕುರಿತ ನಿಯಮಗಳನ್ನು ಯಾವಾಗ ರಚಿಸಲಾಗಿತ್ತು ಮತ್ತು ತಿದ್ದುಪಡಿ ಮಾಡಲಾಗಿದೆ: | ಕರ್ನಾಟಕ ಸಿವಿಲ್ ಸೇವಾ (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳು 1996 ರ ನಿಯಮ 4 (3) ರನ್ವಯ ಅನುಕಂಪದ ಆಧಾರದ ನೇಮಕಾತಿ ಬಯಸುವ ಅಭ್ಯರ್ಥಿಯು ಆ ಹುದ್ದೆಗೆ ಸಂಬಂಧಿತ ನೇಮಕಾತಿ ನಿಯಮಗಳಲ್ಲಿ ನಿರ್ದಿಷ್ಟಪಡಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಹೊಂದಿರಬೇಕಾಗುತ್ತದೆ ಹಾಗೂ ನಿಯಮ 4 (4) ರನ್ವಯ ಅಭ್ಯರ್ಥಿಯ ವಿದ್ಯಾರ್ಹತೆಗನುಗುಣವಾಗಿ ಕರ್ನಾಟಕ ಸರ್ಕಾರ ಸಚಿವಾಲಯದ ಸಹಾಯಕ ಹುದ್ದೆಯ ವೇತನ ಶ್ರೇಣಿಯನ್ನು ಮೀರದಂತಹ ಗರಿಷ್ಠ ಗ್ರೂಪ್"ಸಿ" ಹುದ್ದೆಯನ್ನು ನೀಡಬಹುದಾಗಿದೆ. ಅಭ್ಯರ್ಥಿಯ ವಿದ್ಯಾರ್ಹತೆಗನುಸಾರದ ಹುದ್ದೆಗೆ ನೇಮಕಾತಿ ಮಾಡಲಾಗುವುದರಿಂದ, ಇಲಾಖೆಗಳಲ್ಲಿ ಕೆಲಸದ ಗುಣಮಟ್ಟ ಕಡಿಮೆ ಆಗಿರುವ ಬಗ್ಗೆ ಸಂಬಂಧಪಟ್ಟ ಇಲಾಖೆಗಳಿಂದ ವರದಿ ಆಗಿರುವುದಿಲ್ಲ.<br><br>1996 ರ ಅನುಕಂಪದ ಆಧಾರದ ನೇಮಕಾತಿ ನಿಯಮಗಳನ್ನು ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ: 10.07.1995 ರಂದು ನೀಡಿರುವ ತೀರ್ಪಿನನ್ವಯ ದಿನಾಂಕ: 12.09.1996 ರಂದು ರಚಿಸಲಾಗಿದ್ದು, ನಂತರ, ಕಾಲಕಾಲಕ್ಕೆ ಪರಿಷ್ಕರಿಸಲಾಗಿದ್ದು, ದಿನಾಂಕ: 09.04.2021 ರಂದು ಅವಶ್ಯಕ ತಿದ್ದುಪಡಿಯನ್ನು ತರಲಾಗಿರುತ್ತದೆ. ಹಾಗಾಗಿ, ಪ್ರಸ್ತುತ ಸದರಿ ನಿಯಮಗಳಿಗೆ ತಿದ್ದುಪಡಿ ಮಾಡುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಈ) | ಅನೇಕ ಪ್ರಕರಣಗಳಲ್ಲಿ ಅನುಕಂಪದ ಆಧಾರಿತ ನೇಮಕಾತಿಗಳು ಪ್ರಥಮ ದರ್ಜೆ ಸಹಾಯಕ ಮಟ್ಟದ ಹುದ್ದೆಗಳಿಗೆ ನಡೆಯುತ್ತಿದ್ದು ಅವರ ವಿದ್ಯಾರ್ಹತೆಯ ಗುಣಮಟ್ಟವನ್ನು ಪರಿಶೀಲಿಸದೆ ನಡೆಸುವುದರಿಂದ ಕಡಿಮೆ ಗುಣಮಟ್ಟದ ಅಭ್ಯರ್ಥಿಗಳು ಉನ್ನತ ಮಟ್ಟದ ಹುದ್ದೆಗಳನ್ನು ಹೊಂದಿ ನಿಯಮಿತ ಮೆರಿಟ್ ಅಭ್ಯರ್ಥಿಗಳು ಬಡ್ತಿಯಿಂದ ಅವಕಾಶ ವಂಚಿತರಾಗುವುದು ಮತ್ತು ಇಲಾಖೆಗಳಲ್ಲಿ ಕೆಲಸದ ಗುಣಮಟ್ಟ ಕುಸಿಯುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ: | |
| ಉ) | ಈ ಕುರಿತಂತೆ ಅನುಕಂಪದ ಆಧಾರದ ನೇಮಕಾತಿಗಳಿಗೆ ದ್ವಿತೀಯ ದರ್ಜೆ ಸಹಾಯಕ ಅಥವಾ ಅದಕ್ಕಿಂತ ಕೆಳಮಟ್ಟದ ಹುದ್ದೆಗಳನ್ನು ಮಾತ್ರ ನೀಡುವ ಬಗ್ಗೆ ಸರಕಾರದ ನಿಲುವೇನು: ಸದರಿ ನಿಯಮಗಳನ್ನು ಯಾವಾಗ ತಿದ್ದುಪಡಿ ಮಾಡಲಾಗುವುದು? | |

**ಸಂಖ್ಯೆ: ಸಿಆಸುಇ 93 ಸೇಅನೇ 2025**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ